# Mission Sarkari Jobs

## ನೇಮಕಾತಿ ಅಧಿಸೂಚನೆ: ಗೆಜೆಟೆಡ್ ಪ್ರೊಬೇಷನರ್ (KAS)

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 31-08-2026**

### ನೇಮಕಾತಿಯ ವೇಳಾಪಟ್ಟಿ:

ಪೂರ್ವಭಾವಿ ಪರೀಕ್ಷಾ ದಿನಾಂಕ (ತಾತ್ಕಾಲಿಕ): 15-11-2026

ಮುಖ್ಯ ಪರೀಕ್ಷೆ ದಿನಾಂಕಗಳು: 12-02-2027, 14-02-2027, 16-02-2027, 18-02-2027

ವ್ಯಕ್ತಿತ್ವ ಪರೀಕ್ಷೆ: 10-05-2027 ರಿಂದ 31-05-2027

---

**ಗೆಜೆಟೆಡ್ ಪ್ರೊಬೇಷನರ್ (KAS)** 2026-27ನೇ ಸಾಲಿನ ಹುದ್ದೆಗಳನ್ನು ಭರ್ತಿ ಮಾಡಲು ಆಯೋಗವು ನಡೆಸುವ ಪೂರ್ವಭಾವಿ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಹುದ್ದೆಗಳ ವಿವರ ಕೆಳಕಂಡಂತಿದೆ.

### ಗ್ರೂಪ್-ಎ

| ಹುದ್ದೆ ಮತ್ತು ಇಲಾಖೆಯ ಹೆಸರು |
|---|
| ಸಹಾಯಕ ಆಯುಕ್ತರು (ಕಿರಿಯ ಶ್ರೇಣಿ),ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ |
| ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು, ವಾಣಿಜ್ಯ ತೆರಿಗೆ ಇಲಾಖೆ |
| ಸಹಾಯಕ ನಿರ್ದೇಶಕರು, ಖಜಾನೆ ಇಲಾಖೆ |
| ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು 'ಪಂಚಾಯತ್ ರಾಜ್ ಇಲಾಖೆ |
| ಸಹಾಯಕ ನಿರ್ದೇಶಕರು ಗ್ರೇಡ್-1 ಸಮಾಜ ಕಲ್ಯಾಣ ಇಲಾಖೆ |

Dr. Rajkumar IAS/KAS Academy

# ಗ್ರೂಪ್- ಬಿ

| ಹುದ್ದೆ ಮತ್ತು ಇಲಾಖೆಯ ಹೆಸರು |
| --- |
| ತಹಶೀಲ್ದಾರ್ (ಗ್ರೇಡ್-2) ಕಂದಾಯ ಇಲಾಖೆ |
| ವಾಣಿಜ್ಯ ತೆರಿಗೆ ಅಧಿಕಾರಿ, ವಾಣಿಜ್ಯ ತೆರಿಗೆ ಇಲಾಖೆ |
| ಸಹಾಯಕ ಅಧೀಕ್ಷಕರು, ಒಳಾಡಳಿತ ಇಲಾಖೆ (ಕಾರಾಗೃಹ) |
| ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಇಲಾಖೆ |
| ಸಹಾಯಕ ನಿರ್ದೇಶಕರು, ಕೃಷಿ ಮಾರಾಟ ಇಲಾಖೆ (ಸಹಕಾರ ಇಲಾಖೆ) |
| ಅಬಕಾರಿ ಉಪ ಅಧೀಕ್ಷಕರು, ಆರ್ಥಿಕ ಇಲಾಖೆ (ಅಬಕಾರಿ ಇಲಾಖೆ) |
| ಉದ್ಯೋಗಾಧಿಕಾರಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ |
| ಮುಖ್ಯಾಧಿಕಾರಿ (ಗ್ರೇಡ್-1), ನಗರಾಭಿವೃದ್ಧಿ ಇಲಾಖೆ |
| ಸಹಾಯಕ ಖಜಾನಾಧಿಕಾರಿ, ಆರ್ಥಿಕ ಇಲಾಖೆ, (ಖಜಾನೆ) |
| ಸಹಾಯಕ ನಿರ್ದೇಶಕರು, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ |
| ಶಾಖಾಧಿಕಾರಿ, ಕರ್ನಾಟಕ ಸರ್ಕಾರದ ಸಚಿವಾಲಯ |
| ಶಾಖಾಧಿಕಾರಿ, ಕರ್ನಾಟಕ ಲೋಕಸೇವಾ ಆಯೋಗ |
| ಸಹಾಯಕ ನಿರ್ದೇಶಕರು (ಗ್ರೇಡ್-2) ಸಮಾಜ ಕಲ್ಯಾಣ ಇಲಾಖೆ |

**ಒಟ್ಟು ಹುದ್ದೆಗಳ ಸಂಖ್ಯೆ – 319**
ಉಳಿಕೆ ಮೂಲ ವೃಂದ – 297
ಕಲ್ಯಾಣ ಕರ್ನಾಟಕ ವೃಂದ – 22

---

## 1. ಅರ್ಜಿ ಸಲ್ಲಿಸುವ ಮುನ್ನ ವಿಶೇಷ ಸೂಚನೆಗಳು:-

ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.

ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ಪುರಸ್ಕರಿಸಲಾಗುವುದಿಲ್ಲ.

ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣಪತ್ರ/ಇತರೆ ಪ್ರಮಾಣ ಪತ್ರಗಳನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು

Dr Rajkumar IAS/KAS Academy

ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ತಮ್ಮ ಹೆಸರಿನಲ್ಲಿಯೇ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು (ದಾಖಲೆಗಳು ಸ್ಪಷ್ಟವಾಗಿರಬೇಕು) ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.

ಅರ್ಜಿ ಸಲ್ಲಿಸುವ ಸಮಯದಲ್ಲಿ ಮೀಸಲಾತಿಯನ್ನು ಕೋರದೆ ತದನಂತರದಲ್ಲಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರಿ ಸಲ್ಲಿಸುವ ಮನವಿ/ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ವಿಳಾಸ, ಪ್ರವರ್ಗ, ತಂದೆ-ತಾಯಿ ಹೆಸರು, ವಿದ್ಯಾರ್ಹತೆ ಮುಂತಾದ ವಿಷಯಗಳನ್ನು ತಪ್ಪಾಗಿ ನಮೂದಿಸಿರುವುದಾಗಿ ತಿಳಿಸಿ ಸದರಿ ಮಾಹಿತಿಗಳನ್ನು ಬದಲಾವಣೆ ಮಾಡುವಂತೆ ಮನವಿ ಸಲ್ಲಿಸುತ್ತಿರುವ ಹಿನ್ನೆಲೆಯಲ್ಲಿ ಆಯೋಗಕ್ಕೆ ಒಂದು ಬಾರಿ ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಸದರಿ ಅರ್ಜಿಯಲ್ಲಿನ ಮಾಹಿತಿಗಳನ್ನು ಆಯೋಗದ ಅಧಿಕಾರಿ/ಸಿಬ್ಬಂದಿಗಳಿಗೆ ತಂತ್ರಾಂಶದಲ್ಲಿ ಬದಲಾವಣೆ ಮಾಡಲು ಸಾಧ್ಯವಿರದ ಹಿನ್ನೆಲೆಯಲ್ಲಿ ಅಭ್ಯರ್ಥಿಗಳೇ ನೇರವಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಮಾಹಿತಿಗಳನ್ನು ಸರಿಪಡಿಸಿ ಅರ್ಜಿ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಈ ಸಂಬಂಧ ತದನಂತರ ಸಲ್ಲಿಸಲಾಗುವ ಯಾವುದೇ ಕೋರಿಕೆ/ಮನವಿಗಳನ್ನು ಆಯೋಗದಿಂದ ಪುರಸ್ಕರಿಸಲಾಗುವುದಿಲ್ಲ.

ಅರ್ಜಿಗಳನ್ನು **Online** ಮೂಲಕವೇ ಭರ್ತಿಮಾಡಿ ಭಾವಚಿತ್ರ/ಸಹಿ/ವಯೋಮಿತಿ/ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ನೆಟ್ ಬ್ಯಾಂಕಿಂಗ್/ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/**UPI** ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದ ಹಾಗೂ ದಾಖಲೆಗಳನ್ನು/ಭಾವಚಿತ್ರ/ಸಹಿಯನ್ನು ಅಪ್ಲೋಡ್ ಮಾಡದೇ ಇರುವ/ ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

---

## 2. ಅರ್ಜಿ ಸಲ್ಲಿಸುವ ಹಂತಗಳು:-

**ಒಂದು ಬಾರಿಯ ನೋಂದಣಿ ಪ್ರಕ್ರಿಯೆ (OTR-ONE TIME REGISTRATION)**

ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು (**OTR-One Time Registration)** ಮಾಹಿತಿಯನ್ನು ಮುಂದಿನ ಎಲ್ಲಾ ಅಧಿಸೂಚನೆಗಳಿಗೂ ಪರಿಗಣಿಸಲಾಗುವುದರಿಂದ, ಅಭ್ಯರ್ಥಿಗಳು **Profile Creation/ರುಜುವಾತುಗಳು** ಸೃಷ್ಟಿಸುವ ಹಂತದಲ್ಲಿ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ.

ಅಭ್ಯರ್ಥಿಗಳು **KPSC** ವೆಬ್‌ಸೈಟ್ ಮೂಲಕ ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಇದರ ಹೊರತಾಗಿ ಯಾವುದೇ ಇತರ ಮೂಲಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ

Dr Rajkumar IAS/KAS Academy

ಹೊಸದಾಗಿ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಲು, ಅರ್ಜಿದಾರರು **KPSC** ವೆಬ್ ಸೈಟ್ ನಲ್ಲಿ https://kpsconline.karnataka.gov.in/HomePage ಭೇಟಿ ನೀಡಬೇಕು.

ಅರ್ಜಿಗಳನ್ನು ಸಲ್ಲಿಸುವ ಮೊದಲು ಎಲ್ಲಾ ವಿವರಗಳು ಸರಿಯಾಗಿದೆಯೇ ಎಂದು ಪರಿಶೀಲಿಸಿಕೊಂಡು ಸಲ್ಲಿಸಲು ಸೂಚಿಸಿದೆ. ಅರ್ಜಿ ಸಲ್ಲಿಸಿದ ನಂತರ ವಿವರಗಳನ್ನು ತಪ್ಪಾಗಿ ಸಲ್ಲಿಸಿದ್ದು ಸರಿಪಡಿಸಿಕೊಡುವಂತೆ ಆಯೋಗಕ್ಕೆ ಪತ್ರ ವ್ಯವಹಾರ ಅಥವಾ **E-Mail** ಮೂಲಕ ಕಳುಹಿಸುವ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.

ಇತ್ತೀಚಿನ ಪಾಸ್ ಪೋರ್ಟ್ ಗಾತ್ರದ ಛಾಯಾಚಿತ್ರ ಮತ್ತು ಸಹಿ ಅಪ್‌ಲೋಡ್ ಮಾಡಬೇಕಾಗುತ್ತದೆ. ಛಾಯಾಚಿತ್ರವು **200** ಕೆಬಿ ಮೀರಬಾರದು ಮತ್ತು ಸಹಿ **70** ಕೆಬಿ ಒಳಗೆ ಇರಬೇಕು. ಗಮನಿಸಿ: ಕೇವಲ ಸಹಿ ಮತ್ತು ಛಾಯಾಚಿತ್ರ ವನ್ನು **JPEG/JPG** ಸ್ವರೂಪದಲ್ಲಿ ಅಪ್ಲೋಡ್ ಮಾಡಬೇಕು.

ಅರ್ಜಿಯ ಅಂತಿಮ ಸಲ್ಲಿಕೆಗೆ ಮೊದಲು ಅರ್ಜಿಯಲ್ಲಿನ ಎಲ್ಲಾ ಸಂಬಂಧಿತ ಕ್ಷೇತ್ರಗಳನ್ನು ಸರಿಯಾಗಿ ಭರ್ತಿ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಿ. ನಿರ್ದಿಷ್ಟ ಹುದ್ದೆಗೆ ಅರ್ಜಿ ಸಲ್ಲಿಸಿದ ನಂತರ ಸಲ್ಲಿಸಲಾದ ಅರ್ಜಿಯಲ್ಲಿನ ವಿವರಗಳನ್ನು ಮತ್ತೊಮ್ಮೆ ಬದಲಾವಣೆ ಮಾಡಲು ಬಯಸಿದಲ್ಲಿ "**Applied Post" Tab** ನಲ್ಲಿ ಸಲ್ಲಿಸಲಾದ ಹುದ್ದೆಯ ಅರ್ಜಿಯನ್ನು "**Delete** ಮಾಡಿ ಮತ್ತೊಮ್ಮೆ **OTR** ಅರ್ಜಿಯಲ್ಲಿನ ವಿವರಗಳನ್ನು ಬದಲಾಯಿಸಿಕೊಂಡು ಹೊಸ ಅರ್ಜಿಯನ್ನು ಸಲ್ಲಿಸಬಹುದು. ಆದರೆ **Delete** ಮಾಡಿದ ಹುದ್ದೆಗೆ ಈಗಾಗಲೇ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೆ ಸರಿದೂಗಿಸುವ ಅಥವಾ ಹಿಂದಿರುಗಿಸುವ ಅವಕಾಶವಿರುವುದಿಲ್ಲ

**ಈ ಕೆಳಗಿನ ವಿಧಾನಗಳನ್ನು ಬಳಸಿಕೊಂಡು ಪರೀಕ್ಷಾ ಶುಲ್ಕವನ್ನು ಪಾವತಿಸಬಹುದು:**

ನೆಟ್ ಬ್ಯಾಂಕಿಂಗ್
ಡೆಬಿಟ್ ಕಾರ್ಡ್
ಕ್ರೆಡಿಟ್ ಕಾರ್ಡ್
UPI

---

## 3. ಅರ್ಜಿ ಶುಲ್ಕ:

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.600/- |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.300/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ. 50/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಯಿಂದ ವಿನಾಯಿತಿ ಇದೆ. |

Rajkumar IAS/KAS Academy

## 4. ಅರ್ಹತಾ ಷರತ್ತುಗಳು:

ಭಾರತೀಯ ನಾಗರೀಕನಾಗಿರತಕ್ಕದ್ದು.

ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು.

ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ.

ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

## 5. ಪರೀಕ್ಷೆಯ ಪ್ರಯತ್ನಗಳು:

1997ರ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿ ನಿಯಮಗಳಡಿ ವಯೋಮಿತಿಯ ಷರತ್ತಿಗೊಳಪಟ್ಟಂತೆ ಕೆಳಕಂಡಂತೆ ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರಯತ್ನಗಳನ್ನು ನಿಗದಿಪಡಿಸಲಾಗಿದೆ.

| ಮೀಸಲಾತಿ | ಪ್ರಯತ್ನಗಳು |
|---|---|
| ಸಾಮಾನ್ಯ ಅರ್ಹತೆ (General Merit) ಅಭ್ಯರ್ಥಿಗಳಿಗೆ | 05 ಬಾರಿ |
| ಪ್ರವರ್ಗ (1), ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಅಭ್ಯರ್ಥಿಗಳಿಗೆ | 07 ಬಾರಿ |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ | ಪ್ರಯತ್ನಗಳ ಮಿತಿ ಇರುವುದಿಲ್ಲ. |

**ಸೂಚನೆ:** ಪೂರ್ವಭಾವಿ ಪರೀಕ್ಷೆಯ ಪ್ರತಿಯೊಂದು ಪ್ರಯತ್ನವನ್ನು ಒಂದು ಅವಕಾಶವೆಂದು ಪರಿಗಣಿಸಲಾಗುವುದು. ನಿಗದಿತ ಪ್ರಯತ್ನಗಳ ಮಿತಿಯನ್ನು ಮೀರಿದಲ್ಲಿ ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು.

---

## 6. ಶೈಕ್ಷಣಿಕ ವಿದ್ಯಾರ್ಹತೆ:

ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ವಿಶ್ವವಿದ್ಯಾಲಯದ ಸ್ನಾತಕ ಅಥವಾ ಸ್ನಾತಕೋತ್ತರ ಪದವಿಯನ್ನು ಹೊಂದಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

**ವಿಶೇಷ ಸೂಚನೆ:** ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯ ಅಂತಿಮ ವರ್ಷದಲ್ಲಿ/ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳ ಫಲಿತಾಂಶ ಒಂದು ವೇಳೆ ಪ್ರಕಟವಾಗಿರದಿದ್ದಲ್ಲಿ ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಿಸಿದ ವಿದ್ಯಾರ್ಹತೆ

Dr. Raj KAS Academy

ಪರೀಕ್ಷೆಯನ್ನು ಪಾಸು ಮಾಡಿರುವ ಬಗ್ಗೆ ಅಂತರ್ಜಾಲದಿಂದ ಡೌನ್‌ಲೋಡ್ ಮಾಡಿಕೊಂಡಿರುವ Result Sheet/ಅಂಕಪಟ್ಟಿಗಳನ್ನು ಕಂಟ್ರೋಲರ್/ರಿಜಿಸ್ಟ್ರಾರ್‌ರವರಿಂದ ದೃಢೀಕರಿಸಿ (Attested) ಒದಗಿಸತಕ್ಕದ್ದು. ತಪ್ಪಿದ್ದಲ್ಲಿ ವಿದ್ಯಾರ್ಹತೆ ಹಾಗೂ ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.

---

## 7. ವಯೋಮಿತಿ :

ಸಾಮಾನ್ಯ : 21 - 40 ವರ್ಷಗಳು

ಪ್ರವರ್ಗ 2ಎ, 2ಬಿ, 3ಎ, 3ಬಿ : 21 - 43 ವರ್ಷಗಳು

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1: 21 - 45 ವರ್ಷಗಳು

ಮಾಜಿ ಸೈನಿಕರಿಗೆ : ಸೇವೆ ಸಲ್ಲಿಸಿದ ಅವಧಿ+3 ವರ್ಷಗಳು ವಯೋಮಿತಿ ಸಡಿಲಿಕೆ

ವಿಶೇಷ ಚೇತನ: 10 ವರ್ಷಗಳು ವಯೋಮಿತಿ ಸಡಿಲಿಕೆ

**ವಿವರಣೆ:** ಜನ್ಮ ದಿನಾಂಕಕ್ಕಾಗಿ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿ/ಎಸ್.ಎಸ್.ಎಲ್.ಸಿ ವರ್ಗಾವಣೆ ಪ್ರಮಾಣಪತ್ರ (ಟಿ.ಸಿ)/ ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of cumulative record) ತೋರಿಸುವ ದಾಖಲೆಗಳನ್ನು ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

---

## 8. ದೈಹಿಕ ದಾರ್ಢ್ಯತೆ:

| ಕ್ರ. ಸಂ. | ಸೇವೆ | ಪುರುಷ | | | | ಮಹಿಳೆ | | |
|---|---|---|---|---|---|---|---|---|
| | | ಎತ್ತರ | ಎದೆಯ ಸುತ್ತಳತೆ | ವಿಸ್ತರಣೆ (ಎದೆಯನ್ನು ಪೂರ್ಣವಾಗಿ ವಿಸ್ತರಿಸಿದಾಗ) | ತೂಕ | ಎತ್ತರ | ಎದೆಯ ಸುತ್ತಳತೆ | ತೂಕ |
| 01 | ಕರ್ನಾಟಕ ಪೋಲೀಸ್ ಸೇವೆ ಡಿ.ವೈ.ಎಸ್.ಪಿ. (ಸಿವಿಲ್) (ಗ್ರೂಪ್ ಎ) | 165 ಸೆ.ಮೀ | 84 ಸೆ.ಮೀ | 5 ಸೆ.ಮೀ | ಅನ್ವಯ ವಾಗುವುದಿಲ್ಲ | 157 ಸೆ.ಮೀ | ಅನ್ವಯ ವಾಗುವುದಿಲ್ಲ | ಮಹಿಳೆಯ ಎತ್ತರಕ್ಕೆ ತಕ್ಕಂತೆ, ಆದರೆ 46 ಕೆ.ಜಿ.ಗೆ ಕಡಿಮೆ ಇಲ್ಲದಂತೆ |
| 02 | ಕರ್ನಾಟಕ ಕಾರಾಗೃಹ ಸೇವೆ | 168 ಸೆ.ಮೀ | 86 ಸೆ.ಮೀ | 5 ಸೆ.ಮೀ | ಅನ್ವಯ ವಾಗುವುದಿಲ್ಲ | 157 ಸೆ.ಮೀ | ಅನ್ವಯ ವಾಗುವುದಿಲ್ಲ | -ಅದೇ- |
| 03 | ಅಬಕಾರಿ ಉಪ ಅಧೀಕ್ಷಕರು | 163 ಸೆ.ಮೀ | 81 ಸೆ.ಮೀ | 5 ಸೆ.ಮೀ | ಅನ್ವಯ ವಾಗುವುದಿಲ್ಲ | 157 ಸೆ.ಮೀ | ಅನ್ವಯ ವಾಗುವುದಿಲ್ಲ | 49 ಕೆ.ಜಿ. |

---

mar IAS/KAS Academy

## 9. ನೇಮಕಾತಿ ಹಂತಗಳು:

ಪೂರ್ವಭಾವಿ ಪರೀಕ್ಷೆ (ವಸ್ತು ನಿಷ್ಠ)

ಮುಖ್ಯಪರೀಕ್ಷೆ (ವಿವರಣಾತ್ಮಕ)

ವ್ಯಕ್ತಿತ್ವ ಪರೀಕ್ಷೆ

### A. ಪೂರ್ವಭಾವಿ ಪರೀಕ್ಷೆ (ವಸ್ತು ನಿಷ್ಠ)

ಈ ಪರೀಕ್ಷೆಯು ಎರಡು ಪತ್ರಿಕೆಗಳನ್ನು ಒಳಗೊಂಡಿರುತ್ತದೆ. ಪ್ರತಿ ಪ್ರಶ್ನೆಗೆ ಎರಡು ಅಂಕಗಳಂತೆ ಪ್ರತಿ ಪತ್ರಿಕೆಯು 100 ಪ್ರಶ್ನೆಗಳನ್ನೊಳಗೊಂಡಿರುತ್ತದೆ. ಪ್ರತಿ ಪತ್ರಿಕೆಯು ಗರಿಷ್ಠ 200 ಅಂಕಗಳು ಮತ್ತು **ಎರಡು ಗಂಟೆಗಳ ಕಾಲಾವಧಿ**ಯದಾಗಿದ್ದು (ಎರಡು ಪತ್ರಿಕೆಗಳಿಗೆ ಒಟ್ಟು 400 ಅಂಕಗಳು) ವಿವರ ಈ ಕೆಳಕಂಡಂತಿರುತ್ತದೆ.

ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತದೆ.

ಪ್ರಕಟಿತ ರಿಕ್ತ ಸ್ಥಾನಗಳಿಗೆ ಅನುಗುಣವಾಗಿ **1:15** ಅನುಪಾತದಲ್ಲಿ ಜಾರಿಯಲ್ಲಿರುವ ಮೀಸಲಾತಿ ನೀತಿಯನ್ವಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳು ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದ ಸಾಕಷ್ಟು ಅಭ್ಯರ್ಥಿಗಳನ್ನು ಅದೇ ಅನುಪಾತದಲ್ಲಿ ಪೂರ್ವಭಾವಿ ಪರೀಕ್ಷೆಯಲ್ಲಿ ಅವರು ಗಳಿಸಿದ ಒಟ್ಟು ಅಂಕಗಳ ಆಧಾರದ ಮೇಲೆ ಮುಖ್ಯ ಪರೀಕ್ಷೆಗೆ ಪ್ರವೇಶ ನೀಡಲಾಗುತ್ತದೆ

**ಋಣಾತ್ಮಕ ಮೌಲ್ಯಮಾಪನ:** ಪ್ರತಿಯೊಂದು ಪ್ರಶ್ನೆಗೂ **04** ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ತಪ್ಪು ಉತ್ತರ ನೀಡಿರುವ ಪ್ರತಿಯೊಂದು ಪ್ರಶ್ನೆಗೆ ನಿಗದಿಪಡಿಸಿದ ಅಂಕಗಳ **0.25** ರಷ್ಟು ಅಂಕಗಳನ್ನು (**1/4** ರಷ್ಟು) ಅಂಕಗಳನ್ನು ಕಳೆಯಲಾಗುವುದು.

| ಕ್ರಸಂ./ S.L | ವಿಷಯ/ Subject | ಪ್ರಶ್ನೆಗಳ ಸಂಖ್ಯೆ/ No. of Question | ಅಂಕಗಳು/ Marks |
|---|---|---|---|
| | **ಪತ್ರಿಕೆ–1** | | |
| 1 | ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯಗಳನ್ನು ಒಳಗೊಂಡಂತೆ ಸಾಮಾನ್ಯ ಅಧ್ಯಯನ | 40 | 80 |
| 2 | ಮಾನವಿಕ ಶಾಸ್ತ್ರ | 60 | 120 |
| | **ಒಟ್ಟು** | 100 | 200 |
| | **ಪತ್ರಿಕೆ–2** | | |
| 1 | ರಾಜ್ಯದ ಪ್ರಾಮುಖ್ಯತೆಗೆ ಸಂಬಂಧಿಸಿದಂತೆ ಸಾಮಾನ್ಯ ಅಧ್ಯಯನ | 40 | 80 |
| 2 | ಸಾಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಪರಿಸರ ವಿಜ್ಞಾನ | 30 | 60 |
| 3 | ಸಾಮಾನ್ಯ ಮನೋಸಾಮರ್ಥ್ಯ | 30 | 60 |
| | **ಒಟ್ಟು** | 100 | 200 |

Dr.Rajkumar IAS/KAS Academy

## ಪತ್ರಿಕೆ –I

1. ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಹತ್ವದ ಪ್ರಚಲಿತ ವಿದ್ಯಮಾನಗಳು.
2. ಮಾನವಿಕ ಶಾಸ್ತ್ರ – ಭಾರತದ ಇತಿಹಾಸ – ಕರ್ನಾಟಕವನ್ನು ಪ್ರಾಮುಖ್ಯವಾಗಿರಿಸಿಕೊಂಡು ಭಾರತದ ರಾಷ್ಟ್ರೀಯ ಚಳುವಳಿಗೆ ಹೆಚ್ಚಿನ ಗಮನ ನೀಡಿ ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ಮತ್ತು ರಾಜಕೀಯವಾಗಿ ಇತಿಹಾಸ ವಿಷಯಗಳ ಬಗ್ಗೆ ಅಭ್ಯರ್ಥಿಯ ವಿಸ್ತಾರವಾದ ಸಾಮಾನ್ಯ ತಿಳುವಳಿಕೆ.
3. ಕರ್ನಾಟಕದ ಬಗ್ಗೆ ಹೆಚ್ಚಿನ ಗಮನ ನೀಡುವುದರೊಂದಿಗೆ ಜಾಗತಿಕ ಭೂಗೋಳ ಶಾಸ್ತ್ರ ಮತ್ತು ಭಾರತದ ಭೂಗೋಳ ಶಾಸ್ತ್ರ.
4. ದೇಶದ ರಾಜಕೀಯ ವ್ಯವಸ್ಥೆ, ಗ್ರಾಮೀಣಾಭಿವೃದ್ಧಿ, ಭಾರತದ ನಿರಂತರ ಅಭಿವೃದ್ಧಿಗೆ ಯೋಜನೆ ಮತ್ತು ಆರ್ಥಿಕ ಸುಧಾರಣೆಗಳು, ಬಡತನ ನಿರ್ಮೂಲನೆ, ಜನಸಂಖ್ಯಾಶಾಸ್ತ್ರ, ಸಾಮಾಜಿಕ ಬದಲಾವಣೆಗಳನ್ನು ಒಳಗೊಂಡಂತೆ ಭಾರತದ ರಾಜಕೀಯ ಮತ್ತು ಆರ್ಥಿಕ ವ್ಯವಸ್ಥೆ.

## ಪತ್ರಿಕೆ –II

1. ರಾಜ್ಯದ ಪ್ರಾಮುಖ್ಯತೆಯ ಪ್ರಸ್ತುತ ಘಟನೆಗಳು ಮತ್ತು ರಾಜ್ಯ ಸರ್ಕಾರದ ಪ್ರಮುಖ ಯೋಜನೆಗಳು.
2. ಸಾಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಪರಿಸರ ವಿಜ್ಞಾನ– ವಿಷಯದಲ್ಲಿ ಪ್ರಾವೀಣ್ಯತೆ ಬೇಕಾಗಿಲ್ಲದೆ ಆರೋಗ್ಯ, ಪರಿಸರ ವಿಜ್ಞಾನ, ಜೈವಿಕ ವೈವಿಧ್ಯತೆ ಮತ್ತು ಹವಾಮಾನದಲ್ಲಿ ಬದಲಾವಣೆಗಳು ಇವುಗಳನ್ನೊಳಗೊಂಡಂತೆ
3. ಯಾವುದೇ ವಿಜ್ಞಾನ ವಿಷಯದಲ್ಲಿ ವಿಶೇಷವಾಗಿ ಅಧ್ಯಯನ ಮಾಡದಿರುವ ಒಬ್ಬ ಸುಶಿಕ್ಷಿತ ವ್ಯಕ್ತಿಯಿಂದ ನಿರೀಕ್ಷೆ ಮಾಡುವಂತೆ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ದೈನಂದಿನ ಅನುಭವಗಳು/ ಅವಲೋಕನೆಗಳು/ ಪರಿಣಾಮಗಳು ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಸಮಕಾಲೀನ ಬೆಳವಣಿಗೆಗಳು.
4. ಸಾಮಾನ್ಯ ಮನೋಸಾಮರ್ಥ್ಯ – ಮನೋಶಕ್ತಿ, ಗ್ರಹಿಸುವಿಕೆ, ತಾರ್ಕಿಕ ಪ್ರತಿಪಾದನೆ ಮತ್ತು ವಿಶ್ಲೇಷಣಾ ಸಾಮರ್ಥ್ಯ, ನಿರ್ಧಾರ ತೆಗೆದುಕೊಳ್ಳುವಿಕೆ, ಸಮಸ್ಯೆ ಬಿಡಿಸುವಿಕೆ, ಮೂಲ ಗಣಿತ ಜ್ಞಾನ (ಸಂಖ್ಯೆಗಳು ಮತ್ತು ಅವುಗಳ ಸಂಬಂಧಗಳು, ಅವುಗಳ ಪರಿಮಾಣ ಇತ್ಯಾದಿ) ಮತ್ತು ದತ್ತಾಂಶದ ವ್ಯಾಖ್ಯಾನ (ನಕ್ಷೆಗಳು, ರೇಖಾಚಿತ್ರಗಳು, ಕೋಷ್ಟಕಗಳು, ದತ್ತಾಂಶ ದಕ್ಷತೆ, ಇತ್ಯಾದಿ – ಹತ್ತನೇ ತರಗತಿ / ಎಸ್.ಎಸ್.ಎಲ್.ಸಿ ಪರೀಕ್ಷೆ ಮಟ್ಟದಲ್ಲಿ).

## B. ಮುಖ್ಯ ಪರೀಕ್ಷೆ (ವಿವರಣಾತ್ಮಕ):

ಮುಖ್ಯ ಪರೀಕ್ಷೆಯು ಲಿಖಿತ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯನ್ನು ಒಳಗೊಂಡಿರುತ್ತದೆ

| **ಪತ್ರಿಕೆಗಳು/Papers** | **ವಿಷಯ/Subject** | **ಅಂಕಗಳು / marks** | **ಅವಧಿ Duration (ಗಂಟೆಗಳು/ hours)** |
|---|---|---|---|
| ಅರ್ಹತಾದಾಯಕ ಪತ್ರಿಕೆಗಳು/ Qualifying Papers | ಕನ್ನಡ / Kannada | 150 | 2 |
| | ಇಂಗ್ಲೀಷ್ /English | 150 | 2 |

| | | | | |
|---|---|---|---|---|
| ಕಡ್ಡಾಯ ಪತ್ರಿಕೆಗಳು / Compulsory Papers | ಪತ್ರಿಕೆ -1/ Paper-1 | ಪ್ರಬಂಧ /Essay | 250 | 3 |
| | ಪತ್ರಿಕೆ -2 / Paper -2 | ಸಾಮಾನ್ಯ ಅಧ್ಯಯನ /General Studies -1 | 250 | 3 |
| | ಪತ್ರಿಕೆ -3 / Paper -3 | ಸಾಮಾನ್ಯ ಅಧ್ಯಯನ/General Studies -2 | 250 | 3 |
| | ಪತ್ರಿಕೆ -4 / Paper -4 | ಸಾಮಾನ್ಯ ಅಧ್ಯಯನ /General Studies -3 | 250 | 3 |
| | ಪತ್ರಿಕೆ -5 / Paper -5 | ಸಾಮಾನ್ಯ ಅಧ್ಯಯನ/General Studies -4 | 250 | 3 |
| ಲಿಖಿತ ಪರೀಕ್ಷೆಯ ಒಟ್ಟು ಅಂಕಗಳು /Total marks for the written examination | | | 1250 | |
| ವ್ಯಕ್ತಿತ್ವ ಪರೀಕ್ಷೆಯ ಒಟ್ಟು ಅಂಕಗಳು/Total marks for the Personality Test | | | 25 | |
| **ಒಟ್ಟು/Total** | | | **1275** | |

ಮುಖ್ಯ ಪರೀಕ್ಷೆಯು ವಿವರಣಾತ್ಮಕ ಮಾದರಿಯಲ್ಲಿರುತ್ತದೆ ಮತ್ತು ಎಲ್ಲಾ ಪತ್ರಿಕೆಗಳು ಕಡ್ಡಾಯವಾಗಿರುತ್ತವೆ.

ಪ್ರಶ್ನೆ ಪತ್ರಿಕೆಗಳನ್ನು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳೆರಡರಲ್ಲೂ ಮುದ್ರಿಸಲಾಗಿರುತ್ತದೆ. ಅಭ್ಯರ್ಥಿಗಳು ಪತ್ರಿಕೆಯ ಉತ್ತರಗಳನ್ನು ಸಂಪೂರ್ಣವಾಗಿ ಕನ್ನಡ ಅಥವಾ ಆಂಗ್ಲಭಾಷಾ ಮಾಧ್ಯಮದಲ್ಲಿಯೇ ಉತ್ತರಿಸತಕ್ಕದ್ದು. (ಅರ್ಹತಾದಾಯಕ ಪತ್ರಿಕೆಗಳನ್ನು ಹೊರತುಪಡಿಸಿ).

ಎಲ್ಲಾ **05** ಪತ್ರಿಕೆಗಳು ಕಡ್ಡಾಯ ಪತ್ರಿಕೆಗಳಾಗಿರುತ್ತವೆ. ಪ್ರತಿ ಪತ್ರಿಕೆಯು ಗರಿಷ್ಠ **250** ಅಂಕಗಳನ್ನು ಒಳಗೊಂಡಿದ್ದು**, 3** ಗಂಟೆಗಳ ಕಾಲಾವಕಾಶ ಇರುತ್ತದೆ**.**

ಲಿಖಿತ ಮತ್ತು ವ್ಯಕ್ತಿತ್ವ ಪರೀಕ್ಷೆಯ ಅಂಕಗಳನ್ನು 1:1ರ ಆಯ್ಕೆ ಪಟ್ಟಿಯೊಂದಿಗೆ ಪ್ರಕಟಿಸಲಾಗುವುದು.

Dr.Rajkumar

ಮುಖ್ಯ ಪರೀಕ್ಷೆಯ ಪಠ್ಯಕ್ರಮವನ್ನು ನೋಡಲು ಈ ಲಿಂಕ್ ಅನ್ನು ಕ್ಲಿಕ್ ಮಾಡಿ. https://tinyurl.com/4ky7efwt

### C. ವ್ಯಕ್ತಿತ್ವ ಪರೀಕ್ಷೆ:

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇಮಕಾತಿ) (ತಿದ್ದುಪಡಿ) ನಿಯಮಗಳು 2019 ರಂತೆ ಆಯೋಗವು ಗ್ರೂಪ್-'ಎ' ಮತ್ತು 'ಬಿ' ಸೇವೆಗಳ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ **1:3**ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಕರೆಯಲಾಗುವುದು.

ವ್ಯಕ್ತಿತ್ವ ಪರೀಕ್ಷೆಯು ಗರಿಷ್ಠ **25** ಅಂಕಗಳನ್ನು ಒಳಗೊಂಡಿರುತ್ತದೆ.

---

### ಹೆಚ್ಚಿನ ಮಾಹಿತಿಗಾಗಿ ಆಯೋಗದ ದೂರವಾಣಿ ಸಂಖ್ಯೆಗಳು:

**ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ:** 08030574957 / 08030574901

**ಪರೀಕ್ಷಾ ಶಾಖೆ-1:** 08030574935

## ಹುದ್ದೆಗಳ ವರ್ಗೀಕರಣ, ಅಧಿಸೂಚನೆ ಕುರಿತು ಹೆಚ್ಚಿನ ಮಾಹಿತಿಗಾಗಿ ಈ ಕೆಳಗಿನ ಲಿಂಕ್ ಕ್ಲಿಕ್ ಮಾಡಿ:

https://kpsconline.karnataka.gov.in/Common/Before_Login_File_Download_View?file_path=/Documents/KPSC_Documents/KPSC_Published_Notification_Documents/32_202607311823321999_a9c127d9-c894-4b95-b07c-9243867505c6_KPSC_Notification.pdf

---

**ಉಚಿತ ಸಮಾಲೋಚನೆ ಮತ್ತು ಮಾರ್ಗದರ್ಶನಕ್ಕಾಗಿ ಇಂದೇ ನಮ್ಮ ಅಕಾಡೆಮಿಗೆ ಭೇಟಿ ನೀಡಿ.**

## ಡಾ.ರಾಜ್ ಕುಮಾರ್ ಐ.ಎ.ಎಸ್/ಕೆ.ಎ.ಎಸ್ ಅಕಾಡೆಮಿ

#2948, ಪಶ್ಚಿಮ ಕಾರ್ಡ್ ರಸ್ತೆ, ಮಾರುತಿ ಮಂದಿರ ಎದುರು,
ವಿಜಯನಗರ, ಬೆಂಗಳೂರು – 560040
ಸಂಪರ್ಕಿಸಿ: 9108448444/9108449444 ವೆಬ್ ಸೈಟ್: www.drrajkumaracademy.com

Dr. Rajkumar IAS/KAS Academy